# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 1136 |
| ಸದಸ್ಯರ ಹೆಸರು | ಶ್ರೀ ಕೆ.ಎಸ್. ನವೀನ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 23-02-2024 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯಕ್ಕೆ ಪ್ರತಿ ವರ್ಷ ಬೇಡಿಕೆಯಿರುವ ರಸಗೊಬ್ಬರದ ಪ್ರಮಾಣ ಎಷ್ಟು;</td><td>ರಾಜ್ಯಕ್ಕೆ ಪ್ರತಿ ಸಾಲಿಗೆ ಸರಾಸರಿ 42 ರಿಂದ 43 ಲಕ್ಷ ಮೆ.ಟನ್ ರಸಗೊಬ್ಬರದ ಬೇಡಿಕೆ ಇರುತ್ತದೆ. ಪ್ರಸ್ತುತ ವರ್ಷ ಒಟ್ಟು 42,27,000 ಮೆ.ಟನ್ ಪ್ರಮಾಣದ ವಿವಿಧ ಶ್ರೇಣಿಯ ರಸಗೊಬ್ಬರದ ಬೇಡಿಕೆಯಿರುತ್ತದೆ.
<table>
<tr><th>ಕ್ರ. ಸಂ</th><th>ರಸಗೊಬ್ಬರ ದ ವಿವರ</th><th>ಬೇಡಿಕೆ<br>(ಏಪ್ರಿಲ್ 23 ರಿಂದ ಮಾರ್ಚ್-24)<br>(ಮೆ.ಟನ್ ಗಳಲ್ಲಿ)</th></tr>
<tr><td>1</td><td>ಡಿ.ಎ.ಪಿ</td><td>590000</td></tr>
<tr><td>2</td><td>ಎಂ.ಒ.ಪಿ</td><td>245000</td></tr>
<tr><td>3</td><td>ಕಾಂಪ್ಲೆಕ್ಸ್</td><td>1650000</td></tr>
<tr><td>4</td><td>ಯೂರಿಯಾ</td><td>1610000</td></tr>
<tr><td>5</td><td>ಎಸ್.ಎಸ್.ಪಿ</td><td>132000</td></tr>
<tr><td></td><td>ಒಟ್ಟು</td><td>4227000</td></tr>
</table></td></tr>
<tr><td>ಆ)</td><td>ಕೃಷಿ ಭೂಮಿಯಲ್ಲಿ ರಾಸಾಯನಿಕ ಗೊಬ್ಬರ ಬಳಕೆ ಕಡಿಮೆ ಮಾಡಿ ಉತ್ತಮ ಇಳುವರಿ ಬೆಳೆ ಪಡೆಯಲು ರೈತರಿಗೆ ನ್ಯೂ ಯೂರಿಯಾ, ಕೊಟ್ಟಿಗೆ ಗೊಬ್ಬರ ಬಳಕೆ ಮಾಡಲು ಸರ್ಕಾರ ಯಾವ ಕಾರ್ಯಕ್ರಮ ನೀಡಿದೆ;</td><td>ನ್ಯಾನೋ ಯೂರಿಯಾ (ದ್ರವ ರೂಪ)ದ ಗೊಬ್ಬರವಾಗಿದ್ದು ಭಾರತೀಯ ಕೃಷಿ ಅನುಸಂಧಾನ ಸಂಸ್ಥೆ ಮತ್ತು ರಾಜ್ಯ ಕೃಷಿ ವಿಶ್ವವಿದ್ಯಾನಿಲಯಗಳು ನೀಡಿದ ಉತ್ತೇಜಕ ಕ್ಷೇತ್ರ ಪ್ರಯೋಗಗಳ ಫಲಿತಾಂಶಗಳ ಆಧಾರದ ಮೇಲೆ ರೈತರಿಗೆ ಬಳಕೆ ಮಾಡಲು ಮೆ. ಇಫ್ಕೋ ಸಂಸ್ಥೆಯು ಕೃಷಿ ಇಲಾಖೆಯ ಸಹಯೋಗದೊಂದಿಗೆ ರೈತರಿಗೆ ತರಬೇತಿ/ ಪ್ರಾತ್ಯಕ್ಷಿಕೆ/ ಕಾರ್ಯಾಗಾರ/ ಜಾಹೀರಾತುಗಳ ಮೂಲಕ ನ್ಯಾನೋ ಯೂರಿಯಾದ ಉಪಯೋಗದ ಬಗ್ಗೆ ವ್ಯಾಪಕವಾಗಿ ಪ್ರಚಾರ ನೀಡಿ ಪೂರಕ ಬಳಕೆಗೆ ಉತ್ತೇಜಿಸಲಾಗುತ್ತಿದೆ.<br><br>ಮಣ್ಣು ಪರೀಕ್ಷೆಯ ವರದಿಯನ್ವಯ ರಾಜ್ಯದ ಮಣ್ಣಿನಲ್ಲಿ ಸಾವಯವ ಅಂಶ ಕಡಿಮೆ ಇರುವುದು ಕಂಡುಬಂದಿರುತ್ತದೆ. ಮಣ್ಣಿನಲ್ಲಿ ಸಾವಯವ ಅಂಶವನ್ನು ಹೆಚ್ಚಿಸಲು ಸಾವಯವ ಗೊಬ್ಬರಗಳನ್ನು ಮಣ್ಣಿಗೆ ಸೇರಿಸುವುದು ಅತ್ಯವಶ್ಯಕವಾಗಿರುತ್ತದೆ. ಈ ಬಗ್ಗೆ ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾವಯವ ಗೊಬ್ಬರ/ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರಗಳನ್ನು ಬಳಕೆ ಮಾಡಲು ಇಲಾಖೆಯ ಕ್ಷೇತ್ರ ಸಿಬ್ಬಂದಿಯು ಅಭಿಯಾನ/ತರಬೇತಿ/ಪ್ರಾತ್ಯಕ್ಷಿಕೆಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.</td></tr>
</table>

| | | |
|---|---|---|
| ಇ) | ರೈತರು ಬೆಳೆಗಳನ್ನು ಪರಿಷ್ಕರಿಸಿ, ಸಂರಕ್ಷಿಸಿ ಸಾವಯವ ಬ್ರ್ಯಾಂಡ್ ಮೂಲಕ ಮಾರಾಟ ಮಾಡಲು ಸರ್ಕಾರವು ಸಹಕಾರ ಮತ್ತು ಪ್ರೋತ್ಸಾಹ ನೀಡಲಾಗುತ್ತಿದೆಯೇ? (ಮಾಹಿತಿ ನೀಡುವುದು) | ಹೌದು,<br><br>ರಾಜ್ಯದ ಸಾವಯವ ಬೆಳೆಗಾರರು ತಾವು ಬೆಳೆದ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಹಾಗೂ ಉತ್ತಮ ಧಾರಣೆ ದೊರಕಿಸಿಕೊಡುವ ನಿಟ್ಟಿನಲ್ಲಿ 2016-17ನೇ ಸಾಲಿನಲ್ಲಿ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು ರಾಜ್ಯಾದ್ಯಂತ ರಚಿಸಲಾಗಿದೆ. ಈ ಒಕ್ಕೂಟಗಳ ಮೂಲಕ ಸದಸ್ಯ ರೈತರು ಉತ್ಪಾದಿಸಿದ ಸಾವಯವ ಉತ್ಪನ್ನಗಳ ಸಂಸ್ಕರಣೆ, ವರ್ಗೀಕರಣ, ಮೌಲ್ಯವರ್ಧನೆ, ಪ್ಯಾಕಿಂಗ್ ಮತ್ತು ಮಾರಾಟ ವ್ಯವಸ್ಥೆ ಕಲ್ಪಿಸಿಕೊಡಲಾಗಿದೆ.<br><br>ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸಂಪರ್ಕ ಒದಗಿಸಿಕೊಡುವ ನಿಟ್ಟಿನಲ್ಲಿ ಹಾಗೆಯೇ ಗ್ರಾಹಕ/ಪಾಲುದಾರರಲ್ಲಿ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳ ಬಗ್ಗೆ ಅರಿವು ಮೂಡಿಸಲು ರಾಜ್ಯದ ಹಲವಾರು ಕಡೆ ಸಾವಯವ ಮತ್ತು ಸಿರಿಧಾನ್ಯ ಕಾರ್ಯಾಗಾರ/ ಮೇಳ/ ವಸ್ತು ಪ್ರದರ್ಶನಗಳನ್ನು ಆಯೋಜಿಸಲಾಗುತ್ತಿದೆ.<br><br>ಕೃಷಿ ವಿಶ್ವ ವಿದ್ಯಾಲಯಗಳಲ್ಲಿ ಆಯೋಜಿಸಲಾಗುವ ಕೃಷಿ ಮೇಳಗಳಲ್ಲಿ ಸಾವಯವ ಸಿರಿಧಾನ್ಯ ಉತ್ಪನ್ನಗಳ ಪ್ರತ್ಯೇಕ ಪೆವಿಲಿಯನ್ ಗಳನ್ನು ಸ್ಥಾಪಿಸಲಾಗುತ್ತಿದೆ. ಅಲ್ಲದೇ ಇತರೆ ರಾಜ್ಯಗಳಲ್ಲಿ ಆಯೋಜಿಸುವ ಮೇಳಗಳಲ್ಲಿ ಭಾಗವಹಿಸಲಾಗುತ್ತಿದೆ.<br><br>ಮುಂದುವರೆದು, ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆ ಸಂಪರ್ಕ ಕಲ್ಪಿಸಿಕೊಡುವ ನಿಟ್ಟಿನಲ್ಲಿ 2017 ರಲ್ಲಿ ರಾಷ್ಟ್ರಮಟ್ಟದ ಸಾವಯವ ಮತ್ತು ಸಿರಿಧಾನ್ಯ ಮೇಳ, ನಂತರ 2018, 2019, 2023 ಹಾಗು 2024 ರಲ್ಲಿ ಅಂತರರಾಷ್ಟ್ರೀಯ ವಾಣಿಜ್ಯ ಮೇಳಗಳನ್ನು ಆಯೋಜಿಸಲಾಗಿರುತ್ತದೆ.<br><br>ಮುಂದುವರೆದು, ಸಾವಯವ ಕೃಷಿಯನ್ನು ಉತ್ತೇಜಿಸಲು ಸರ್ಕಾರ ರೂಪಿಸಿರುವ ಯೋಜನೆಗಳು ಈ ಕೆಳಕಂಡಂತಿವೆ;<br><br>**ಅ) ಸಾವಯವ ಕೃಷಿ ಅಳವಡಿಕೆ ಮತ್ತು ದೃಢೀಕರಣ:**<br><br>ಈ ಕಾರ್ಯಕ್ರಮವು ಪ್ರಸ್ತಾವನೆ ಆಧಾರಿತವಾಗಿದ್ದು ಅರ್ಹ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳಿಗೆ ಸಾವಯವ ಪ್ರಮಾಣೀಕರಣದ ಶೇ 90 ರಷ್ಟು ಶುಲ್ಕವನ್ನು ಇಲಾಖೆಯು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನ ಸಂಸ್ಥೆ (KSSOCA) ಯ ಮುಖಾಂತರ ಭರಿಸಲಾಗುತ್ತಿದೆ.<br><br>**ಆ) ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು:**<br>ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, |

| | | |
|---|---|---|
| | | ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್ ಗೆ ರೂ. 10,000/- ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ. 10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.<br><br>**ಇ) ಸಾವಯವ ಇಂಗಾಲ ಅಭಿಯಾನ:**<br>ಮಣ್ಣಿನಲ್ಲಿ ಸಾವಯವ ಇಂಗಾಲದ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ ರೈತರಿಗೆ ಪ್ರತಿ ಹೆಕ್ಟೇರ್'ಗೆ ರೂ.2500/-ಗಳನ್ನು(ಶೇ.100) ಮೀರದಂತೆ ಸಹಾಯಧನ ನೀಡಲಾಗುತ್ತಿದೆ ಜೊತೆಗೆ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ, ಸನ್ಹೆಂಪ್ ಇತ್ಯಾದಿ ಹಸಿರೆಲೆ ಗೊಬ್ಬರ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳ ಮೂಲಕ ವಿತರಣೆ ಮಾಡಲಾಗುತ್ತಿದೆ.<br><br>**ಈ) ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳ ವಿತರಣಾ ಕಾರ್ಯಕ್ರಮ:**<br>ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ಸಾವಯವ ಕೃಷಿಯೆಡೆಗೆ ರೈತರನ್ನು ಕೊಂಡೊಯ್ಯುವ ಉದ್ದೇಶದಿಂದ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ಶೇ. 50 ರ ರಿಯಾಯಿತಿ ದರದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತಿದೆ.<br><br>**ಉ) ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಠಿಕ ಭದ್ರತೆ (ಹಿಂದಿನ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ):**<br>ಬೆಳೆವಾರು ಕಾರ್ಯಕ್ರಮಗಳಡಿ ಸಮಗ್ರ ಪೋಷಕಾಂಶ ನಿರ್ವಹಣೆ ಘಟಕಗಳಡಿ ಜೈವಿಕ ಗೊಬ್ಬರಗಳಾದ ರೈಜೋಬಿಯಂ/PSB ಮತ್ತು ಹಸಿರೆಲೆ ಬಿತ್ತನೆ ಬೀಜಗಳನ್ನು ಶೇ 50ರ ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ. |

ಸಂಖ್ಯೆ: AGRI/32/ACT/2023

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು